# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1247 (1252)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ದೇವಸ್ಥಾನಗಳಿಗೆ ಸೇರಿದ ಜಾಗದ ಕುರಿತು

(ಅ) ರಾಜ್ಯದ ಮುಜರಾಯಿ ಇಲಾಖೆಯ ದೇವಸ್ಥಾನಗಳಿಗೆ ಸೇರಿದ ಎಷ್ಟು ಎಕರೆ ಭೂಮಿಯನ್ನು ಇದುವರೆಗೆ ಪರಭಾರೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೃಷಿ ಚಟುವಟಿಕೆಗಳನ್ನು ಉತ್ತೇಜಿಸುವ ಸಲುವಾಗಿ ದೇವಸ್ಥಾನಗಳ ಉಂಬಳಿ ಭೂಮಿಯನ್ನು ಪರಭಾರೆ ಮಾಡಿರುವ ಎಷ್ಟು ಎಕರೆ ಪ್ರದೇಶದಲ್ಲಿ ಇಂದಿಗೂ ಕೃಷಿ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ;

(ಇ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂದು ಕೃಷಿ ಚಟುವಟಿಕೆ ನಡೆಸದೆ ಸದರಿ ಭೂಮಿಯನ್ನು ಕೃಷಿಯೇತರ ಉದ್ದೇಶಗಳಿಗಾಗಿ ಎಷ್ಟು ಎಕರೆ ಭೂಮಿಯನ್ನು ಪರಿವರ್ತಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)